ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/86:ಸುತ್ತೋಲೆ/2016-17

ದಿನಾಂಕ: 19.02.2018.

# ಸುತ್ತೋಲೆ

ವಿಷಯ: 2018ರ ದ್ವಿತೀಯ ಪಿಯುಸಿ ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ನಡೆಸುವ ಸಂಬಂಧ ಇಲಾಖಾ ವ್ಯಾಪ್ತಿಯ ಕಾಲೇಜುಗಳ ಕಟ್ಟಡ/ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ: ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು, ರವರ ಪತ್ರ ಸಂಖ್ಯೆ:ಪಪೂಶಿಇ/ಪರೀಕ್ಷೆ/ದ್ವಿಪಿಪ/2017-18 ದಿ:16.02.2018.

* * * * * *

2018ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳನ್ನು ಮಾರ್ಚ್ ತಿಂಗಳಿನಲ್ಲಿ ದಿನಾಂಕ:01.03.2018 ರಿಂದ 17.03.2018 ರವರೆಗೆ ನಡೆಸಲು ಪದವಿ ಪೂರ್ವ ಶಿಕ್ಷಣ ಇಲಾಖೆಯು ತೀರ್ಮಾನಿಸಿದ್ದು, ಪದವಿ ತರಗತಿಗಳಿಗೆ ಬೋಧಿಸಲಾಗುತ್ತಿರುವ ಪ್ರಥಮ ದರ್ಜೆ ಕಾಲೇಜುಗಳನ್ನು ಸಹ ದ್ವಿತೀಯ ಪಿಯುಸಿ ಪರೀಕ್ಷೆಗಳಿಗೆ ಪರೀಕ್ಷಾ ಕೇಂದ್ರಗಳನ್ನಾಗಿ ಬಳಸಿಕೊಳ್ಳಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಈ ಸಂಬಂಧ ಸದರಿ ಪರೀಕ್ಷೆಗಳು ನಡೆಯುವ ಕಾಲೇಜುಗಳಲ್ಲಿ ಕಟ್ಟಡ/ಕೊಠಡಿಗಳನ್ನು ಹಾಗೂ ಇತರ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಹಾಗೂ ಸದರಿ ಪರೀಕ್ಷೆಗಳು ಸುಗಮವಾಗಿ ನಡೆಸಲು ಪ್ರಾಂಶುಪಾಲರು, ಬೋಧಕ - ಬೋಧಕೇತರ ಸಿಬ್ಬಂದಿಗಳು ಅಗತ್ಯ ಸಹಕಾರ ನೀಡುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ - ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) - ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ನಿರ್ದೇಶಕರ ಆಪ್ತ ಶಾಖೆಗೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012.
2. ಕಛೇರಿ ಪ್ರತಿ.